## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹೊಸ ಜಿಲ್ಲೆಯಾದ ಯಾದಗಿರಿಯಲ್ಲಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲು 2015-16ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ದಿನಾಂಕ:22.08.2011.
2. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ದಿನಾಂಕ:15.03.2012.
3. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ದಿನಾಂಕ:19.03.2013.
4. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ದಿನಾಂಕ:28.11.2013.
5. ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ದಿನಾಂಕ:27.11.2014.
6. ಜಿಲ್ಲಾಧಿಕಾರಿಗಳು, ಯಾದಗಿರಿ ಇವರ ಪತ್ರ ದಿನಾಂಕ:03.10.2015.

**ಪ್ರಸ್ತಾವನೆ:**

ಹೊಸ ಜಿಲ್ಲೆ ಯಾದಗಿರಿಯಲ್ಲಿ ರೂ.50.00 ಕೋಟಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸಚಿವ ಸಂಪುಟದಲ್ಲಿ ತೀರ್ಮಾನಿಸಲಾಗಿದೆ. ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1), (2), (3) (4) ಮತ್ತು (5)ರಲ್ಲಿ 2011-12, 2012-13 2013-14 ಮತ್ತು 2014-15ನೇ ಸಾಲುಗಳಲ್ಲಿ ಯಾದಗಿರಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಬಿಡುಗಡೆ ಮಾಡಲಾಗಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಲೆಕ್ಕಶೀರ್ಷಿಕೆ | 2011-12 | 2012-13 | 2013-14 | 2014-15 | ಒಟ್ಟು |
|---|---|---|---|---|---|---|
| 1 | 4515-00-101-1-03-132 | 1500.00 | 336.86 | 810.00 | 600.00 | 3246.86 |
| 2 | 4515-00-101-1-03-422 | 700.00 | 250.00 | - | - | 950.00 |
| 3 | 4515-00-101-1-03-423 | 250.00 | 88.50 | - | - | 338.50 |
| | **ಒಟ್ಟು** | **2450.00** | **675.36** | **810.00** | **600.00** | **4535.36** |

ನೂತನ ಜಿಲ್ಲೆಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು 2015-16ನೇ ಸಾಲಿನ ಪೂರಕ ಅಂದಾಜಿನಲ್ಲಿ ರೂ.700.00 ಲಕ್ಷಗಳನ್ನು ಒದಗಿಸಲಾಗಿದೆ. ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಪತ್ರದಲ್ಲಿ ಜಿಲ್ಲಾಧಿಕಾರಿಯವರು, ಯಾದಗಿರಿ ಜಿಲ್ಲೆ, ಇವರು ಯಾದಗಿರಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ಬೆಂಗಳೂರು, ದಿನಾಂಕ:26.11.2015**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೊಸ ಜಿಲ್ಲೆಯಾದ ಯಾದಗಿರಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಲೆಕ್ಕಶೀರ್ಷಿಕೆ 4515-00-101-1-03-132 (ಬಂಡವಾಳ ವೆಚ್ಚ) (ಯೋಜನೆ)ಅಡಿ ರೂ.350.00 ಲಕ್ಷ(ಮೂರು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆ ಮಾಡಿದೆ.

ಬಿಡುಗಡೆಯಾದ ಈ ಅನುದಾನವನ್ನು ಸರ್ಕಾರಿ ಆದೇಶ ಸಂಖ್ಯೆ:ಯೋಇ 17 ಹೈಕಮಂ 2011, ದಿನಾಂಕ:12.07.2011ರಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಉಪಯೋಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿಎಫ್‌ಪಿ 2015, ದಿನಾಂಕ:09.04.2015 ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತವಾದ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಫೀ ಅಹಮದ್.ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ :

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಜಿಲ್ಲಾಧಿಕಾರಿಯವರು, ಯಾದಗಿರಿ ಜಿಲ್ಲೆ, ಯಾದಗಿರಿ.
3) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಯಾದಗಿರಿ ಜಿಲ್ಲೆ, ಯಾಧಗಿರಿ.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6), ವಿಧಾನಸೌಧ.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಇವರ ಆಪ್ತಕಾರ್ಯದರ್ಶಿಯವರು, ಬಹುಮಹಡಿಗಳ ಕಟ್ಟಡ.
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
8) ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು.
9) ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಇವರ ಆಪ್ತ ಸಹಾಯಕರು.
10) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

***